**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ರವರ ನ್ಯಾಯಾಲಯ, ಮಳವಳ್ಳಿ.**

**ಸಿಸಿ ನಂಃ 22/2022**

| | | |
|---|---|---|
| ಹೆಸರು | ಪುಟ್ಟದಾಸೇಗೌಡ | ಸಿ.ಡಬ್ಲ್ಯೂ - 10 |
| ತಂದೆಯ ಹೆಸರು | ಕುಳ್ಳೇಗೌಡ | ಪಿ.ಡಬ್ಲ್ಯೂ - 8 |
| ವಯಸ್ಸು | 48 ವರ್ಷ | |
| ಉದ್ಯೋಗ | ವ್ಯವಸಾಯ | |
| ವಾಸ ಸ್ಥಳ | ಟಿ.ಕೆ. ಹಳ್ಳಿ | |

ಸಾಕ್ಷಿಗೆ ದಿನಾಂಕಃ 23.06.2026 ರಂದು ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಎ ಪಿ ಪಿ ರರಿಂದ ಃ

ಈಗ ನೋಡುತ್ತಿರುವ ದಾಖಲೆಗೆ ಪೊಲೀಸರ ಕೋರಿಕೆ ಮೇರೆಗೆ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ಸದರಿ ದಾಖಲೆಯನ್ನು ನಿಪಿ **11** ಎಂದು ಗುರುತಿಸಲಾಯಿತು. ನಿಪಿ **11** ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿರುವುದಿಲ್ಲ. ನಾನು ಪೊಲೀಸರ ಮುಂದೆ ಹೇಳಿಕೆಯನ್ನು ನೀಡಿರುವುದಿಲ್ಲ. ಈಗ ನೋಡುತ್ತಿರುವ ಫೋಟೋದಲ್ಲಿ ನನ್ನ ಭಾವಚಿತ್ರ ಇರುತ್ತದೆ. ಸದರಿ ಫೋಟೋವನ್ನು ಯಾವ ಉದ್ದೇಶಕ್ಕೆ ತೆಗೆಸಿರುತ್ತಾರೆ ಎಂದು ನನಗೆ ಗೊತ್ತಿರುವುದಿಲ್ಲ.

ಎಪಿಪಿ ಯವರ ವಿನಂತಿ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿಸಲಾಯಿತು.

ಪಾಟೀ ಸವಾಲುಃ ಎ ಪಿ ಪಿ ರವರಿಂದ ಃ

ದಿ: 08.11.2021 ರಂದು ಆರೋಪಿತರು ಕೃತ್ಯದ ಸ್ಥಳವನ್ನು ತೋರಿಸಿದ ಮೇರೆಗೆ ಆರೋಪಿತರ ಸಮಕ್ಷಮ ಸಂಜೆ 6-45 ರಿಂದ 7-30 ಅವಧಿಯಲ್ಲಿ ನಿಪಿ 11 ರಂತೆ ಪೊಲೀಸರು ನನ್ನ ಮತ್ತು ಚಾಸಾ 9 ರವರ ಸಮಕ್ಷಮ ಮಹಜರ್ ಜರುಗಿಸಿ, ಈಗ ನೋಡುತ್ತಿರುವ ನಿಪಿ 12 ರಂತೆ ಫೋಟೋ ತೆಗೆಸಿರುತ್ತಾರೆ ಎಂದರೆ ಸರಿಯಲ್ಲ. ಈ ಸಂಬಂಧವಾಗಿ ಈಗ ಓದಿ ಹೇಳಲಾದಂತೆ ನಾನು ಪೊಲೀಸರ ಮುಂದೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ಅಲ್ಲಗಳೆದ ಕಾರಣ ಅದನ್ನು ನಿಪಿ 13 ಎಂದು ಗುರುತಿಸಲಾಯಿತು. ಎಲ್ಲಾ ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು ಃಆರೋಪಿ ಪರ: ವಕೀಲರಿಂದ

ಪಾಟೀ ಸವಾಲು ಇರುವುದಿಲ್ಲ.

ಮರು ವಿಚಾರಣೆ ಇಲ್ಲ.

ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು.

ಓ ಹೇ ಕೇ ಸ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಮಳವಳ್ಳಿ.